# ಕರ್ನಾಟಕ ರಾಜ್ಯಪತ್ರ

**ಅಧಿಕೃತವಾಗಿ ಪ್ರಕಟಿಸಲಾದುದು**

**ವಿಶೇಷ ರಾಜ್ಯ ಪತ್ರಿಕೆ**

| ಭಾಗ – ೩<br>**Part – III** | ಬೆಂಗಳೂರು, ಶನಿವಾರ, ೧೭, ಜನವರಿ, ೨೦೨೬(ಪುಷ್ಯ, ೨೭, ಶಕವರ್ಷ, ೧೯೪೭)<br>BENGALURU, SATURDAY, 17, JANUARY, 2026(PUSHYA , 27, SHAKAVARSHA, 1947) | ನಂ. ೮೦<br>**No. 80** |
|---|---|---|


## ಕರ್ನಾಟಕ ಸರ್ಕಾರ

### ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗ

**ನಂ.204, 2ನೇ ಮಹಡಿ, 3ನೇ ಗೇಟ್,**
**ಬಹುಮಹಡಿಗಳ ಕಟ್ಟಡ,**
**ಬೆಂಗಳೂರು-560001**

---

**ಸಂಖ್ಯೆ:** ಕಪಂರಾಸೀನಿಆ/81/ಪ್ರಾ.ಗ.ನಿ/2023 **ದಿನಾಂಕ:17-01-2026**

## ಪ್ರಕಟಣೆ

**ವಿಜಯಪುರ ಜಿಲ್ಲೆಯ, ವಿಜಯಪುರ ಮತ್ತು ತಿಕೋಟಾ ತಾಲ್ಲೂಕುಗಳ ಜಿಲ್ಲಾ ಪಂಚಾಯತಿ ಚುನಾಯಿತ ಸದಸ್ಯರ ಸಂಖ್ಯೆ ನಿಗದಿ ಹಾಗೂ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳ ಸೀಮಾ/ಗಡಿ ನಿರ್ಣಯ ಕುರಿತು.**

ನಗರಾಭಿವೃದ್ಧಿ ಇಲಾಖೆಯು, ವಿಜಯಪುರ ಜಿಲ್ಲೆಯ ವಿಜಯಪುರ ಮತ್ತು ತಿಕೋಟಾ ತಾಲ್ಲೂಕುಗಳ ಕೆಲವು ಗ್ರಾಮೀಣ ಪ್ರದೇಶಗಳನ್ನು ನಗರ ಸ್ಥಳೀಯ ಸಂಸ್ಥೆಗಳನ್ನಾಗಿ ಪರಿವರ್ತಿಸಿ ಅಧಿಸೂಚನೆಯನ್ನು ಹೊರಡಿಸಿರುತ್ತದೆ. ಈ ಹಿನ್ನೆಲೆಯಲ್ಲಿ, ಈಗಾಗಲೇ ದಿನಾಂಕ:16-12-2023ರಲ್ಲಿ ಅಧಿಸೂಚಿಸಿ ಹೊರಡಿಸಿರುವ ವಿಜಯಪುರ ಮತ್ತು ತಿಕೋಟಾ ತಾಲ್ಲೂಕುಗಳ ಜಿಲ್ಲಾ ಪಂಚಾಯಿತಿ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳ ವ್ಯಾಪ್ತಿಯಿಂದ ಪರಿವರ್ತನೆಗೊಂಡಿರುವ ಗ್ರಾಮೀಣ ಪ್ರದೇಶಗಳನ್ನು ಕೈಬಿಡಬೇಕಾಗಿರುತ್ತದೆ. ಆದ್ದರಿಂದ, ಸರ್ಕಾರವು, ದಿನಾಂಕ:06-01-2026 ರ ಕರ್ನಾಟಕ ರಾಜ್ಯ ಪತ್ರದಲ್ಲಿ ವಿಜಯಪುರ ಮತ್ತು ತಿಕೋಟಾ ತಾಲ್ಲೂಕುಗಳ ಚುನಾಯಿತ ಸದಸ್ಯರ ಸಂಖ್ಯೆ ಹಾಗೂ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳ ಸೀಮಾ/ಗಡಿ ನಿರ್ಣಯವನ್ನು ಹಿಂಪಡೆದಿರುತ್ತದೆ. ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವು ವಿಜಯಪುರ ತಾಲ್ಲೂಕಿನ ಪರಿಷ್ಕೃತ ಸದಸ್ಯರ ಸಂಖ್ಯೆಯನ್ನು ಹಾಗೂ ಸೀಮಾ/ಗಡಿಗಳನ್ನು ನಿಯಮಾನುಸಾರ ರಚಿಸಬೇಕಾಗಿರುತ್ತದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 160, 161 ಮತ್ತು 163ರ ಅನ್ವಯ ಹಾಗೂ 308(ಇ)(ಎಫ್)ರ ಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವು ವಿಜಯಪುರ ಜಿಲ್ಲೆಯ, ವಿಜಯಪುರ ಮತ್ತು ತಿಕೋಟಾ ತಾಲ್ಲೂಕುಗಳ ಜಿಲ್ಲಾ ಪಂಚಾಯತಿ ಚುನಾಯಿತ ಸದಸ್ಯರ ಸಂಖ್ಯೆಯನ್ನು ಕೋಷ್ಠಕ **'ಅ'** ದಲ್ಲಿರುವಂತೆ ನಿಗದಿಪಡಿಸಿದೆ. '**ಅ'** ಕೋಷ್ಠಕದ **2ನೇ** ಅಂಕಣದಲ್ಲಿರುವ ತಾಲ್ಲೂಕಿನಿಂದ ಆಯ್ಕೆಯಾಗುವ ಜಿಲ್ಲಾ ಪಂಚಾಯತಿ ಸದಸ್ಯರುಗಳ ಸಂಖ್ಯೆಯನ್ನು **3ನೇ** ಅಂಕಣದಲ್ಲಿ ನಿಗದಿಪಡಿಸಿದೆ.

ವಿಜಯಪುರ ಜಿಲ್ಲೆಯ, ವಿಜಯಪುರ ಮತ್ತು ತಿಕೋಟಾ ತಾಲ್ಲೂಕುಗಳ ವ್ಯಾಪ್ತಿಯೊಳಗಿರುವ ಪ್ರದೇಶಗಳನ್ನು ಅನುಕ್ರಮವಾಗಿ 4 ಮತ್ತು 3 ಏಕ ಸದಸ್ಯ ಜಿಲ್ಲಾ ಪಂಚಾಯಿತಿ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳನ್ನಾಗಿ ವಿಂಗಡಿಸಿ ಅವುಗಳ ಸೀಮಾ/ಗಡಿಯನ್ನು ಕೋಷ್ಟಕ **'ಆ'** ದಲ್ಲಿರುವಂತೆ ನಿರ್ಣಯಿಸಿದೆ. **ಆ'** ಕೋಷ್ಠಕದ **3ನೇ** ಅಂಕಣದಲ್ಲಿ ಪ್ರತಿಯೊಂದು ಜಿಲ್ಲಾ ಪಂಚಾಯತ್ ಪ್ರಾದೇಶಿಕ ಚುನಾವಣಾ ಕ್ಷೇತ್ರದ ಸಂಖ್ಯೆ ಹಾಗೂ ಹೆಸರನ್ನು ಮತ್ತು ಕೋಷ್ಟಕದ

**4ನೇ** ಅಂಕಣದಲ್ಲಿ ನಮೂದಿಸಿರುವ ಗ್ರಾಮಗಳನ್ನೊಳಗೊಂಡ ಪ್ರದೇಶವನ್ನು ಆ ಪ್ರಾದೇಶಿಕ ಚುನಾವಣಾ ಕ್ಷೇತ್ರದ ವ್ಯಾಪ್ತಿಯೆಂದು ನಿಗದಿಪಡಿಸಿದೆ.

ವಿಜಯಪುರ ಜಿಲ್ಲೆಯ, ವಿಜಯಪುರ ಮತ್ತು ತಿಕೋಟಾ ತಾಲ್ಲೂಕುಗಳ ಜಿಲ್ಲಾ ಪಂಚಾಯತಿ ಚುನಾಯಿತ ಸದಸ್ಯರ ಸಂಖ್ಯೆ ಹಾಗೂ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳ ವ್ಯಾಪ್ತಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳಿದ್ದಲ್ಲಿ, ಪ್ರಕಟಣೆಯ ದಿನಾಂಕದಿಂದ **7 (ಏಳು) ದಿವಸಗಳ ಒಳಗಾಗಿ ಅಂದರೆ ದಿನಾಂಕ:23-01-2026, ಸಂಜೆ 5.00 ಗಂಟೆಯ ಒಳಗೆ** ಸಲ್ಲಿಸಲು ತಿಳಿಸಿದೆ. ಆಕ್ಷೇಪಣೆಗಳನ್ನು ಆನ್‌ಲೈನ್ ಮೂಲಕ ಹಾಗೂ ಖುದ್ದಾಗಿ/ಅಂಚೆಯ ಮೂಲಕ ಈ ಕೆಳಕಂಡ ವಿಳಾಸಕ್ಕೆ ಸಲ್ಲಿಸತಕ್ಕದ್ದು. ಅಂಚೆಯ ಮೂಲಕ ಸಲ್ಲಿಸಿದಾಗಲೂ, ಆಯೋಗವು ನಮೂದಿಸಿದ ದಿನಾಂಕದೊಳಗೆ ಸಲ್ಲಿಸತಕ್ಕದ್ದು. ನಂತರ ಸ್ವೀಕೃತವಾದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಹಾಗೂ ಅಂಚೆ ಇಲಾಖೆಯ ವಿಳಂಬಕ್ಕೆ ಆಯೋಗವು ಜವಾಬ್ದಾರರಾಗಿರುವುದಿಲ್ಲ ಎಂದು ಈ ಮೂಲಕ ತಿಳಿಸಿದೆ.

**(ಅ) ಆನ್ ಲೈನ್ ಮೂಲಕ:**

**ವೆಬ್ ಸೈಟ್ ವಿಳಾಸ: "https://rdpr.karnataka.gov.in/rdc/public/"** ಸದರಿ ವೆಬ್‌ಸೈಟ್ ನ ಮುಖಪುಟದ ಎಡಭಾಗದಲ್ಲಿರುವ ಸಾರ್ವಜನಿಕ ಸಲಹೆಗಳು ಎಂಬ ಶೀರ್ಷಿಕೆಯನ್ನು CLICK ಮಾಡಿ ತಮ್ಮ ಆಕ್ಷೇಪಣೆಗಳನ್ನು ಆನ್‌ಲೈನ್ ನಲ್ಲಿ ಸಲ್ಲಿಸಬಹುದು.

**(ಆ) ಖುದ್ದಾಗಿ/ಅಂಚೆ ಮೂಲಕ:**

ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗ.
3ನೇ ಗೇಟ್, 2ನೇ ಮಹಡಿ, ಕೊಠಡಿ ಸಂಖ್ಯೆ: 222/A, ಬಹುಮಹಡಿ ಕಟ್ಟಡ,
ಅಂಬೇಡ್ಕರ್ ವೀಧಿ, ಬೆಂಗಳೂರು-560001.

**ಕೋಷ್ಟಕ "ಅ"**

| ವಿಜಯಪುರ ಜಿಲ್ಲೆ | | |
|---|---|---|
| **ಕ್ರ. ಸಂ.** | **ತಾಲ್ಲೂಕಿನ ಹೆಸರು** | **ಜಿಲ್ಲಾ ಪಂಚಾಯತಿಯ ಸದಸ್ಯರ ಸಂಖ್ಯೆ** |
| 1 | 2 | 3 |
| | ವಿಜಯಪುರ | 4 |
| | ತಿಕೋಟಾ | 3 |

**ಕೋಷ್ಟಕ "ಆ"**

| ವಿಜಯಪುರ ಜಿಲ್ಲೆ | | | |
|---|---|---|---|
| **ಕ್ರ ಸಂ** | **ತಾಲ್ಲೂಕಿನ ಹೆಸರು** | **ಜಿಲ್ಲಾ ಪಂಚಾಯತಿ ಪ್ರಾದೇಶಿಕ ಚುನಾವಣಾ ಕ್ಷೇತ್ರದ ಸಂಖ್ಯೆ ಮತ್ತು ಹೆಸರು** | **ಜಿಲ್ಲಾ ಪಂಚಾಯತಿ ಪ್ರಾದೇಶಿಕ ಚುನಾವಣಾ ಕ್ಷೇತ್ರದ ವ್ಯಾಪ್ತಿಯಲ್ಲಿನ ಗ್ರಾಮಗಳ ಹೆಸರು** |
| 1 | 2 | 3 | 4 |
| **1** | **ವಿಜಯಪುರ** | 14-ಕನ್ನೂರ | ಕನ್ನೂರ, ಮಡಸನಾಳ, ಮಖಣಾಪೂರ, ಶಿರನಾಳ, ನರಸಿಂಹ ನಗರ (ಮಖಣಾಪೂರ ಎಲ್ ಟಿ), ಡೊಮನಾಳ, ಕನ್ನಾಳ, ಗುಣಕಿ, ಮಿಂಚನಾಳ, ರಾಮನಗರ (ಮಿಂಚನಾಳ ಎಲ್ ಟಿ), ತಿಡಗುಂದಿ, ಬೊಮ್ಮನಳ್ಳಿ. |
| **2** | ವಿಜಯಪುರ | 15-ನಾಗಠಾಣ | ನಾಗಠಾಣ, ಹುಣಶ್ಯಾಳ, ಜಂಬಗಿ (ಆ), ಹೊನ್ನಳ್ಳಿ, ದ್ಯಾಬೇರಿ, ಅಲಿಯಾಬಾದ, ಇಂಗನಾಳ, ಗೂಗದಡ್ಡಿ, ಆಹೇರಿ (ಜ), ಅಂಕಲಗಿ. |
| **3** | ವಿಜಯಪುರ | 16-ಶಿವಣಗಿ | ಮದಭಾವಿ, ಕವಲಗಿ, ರಾಜಾಜಿ ನಗರ (ಮದಭಾವಿ ಎಲ್ ಟಿ), ಶಿವಣಗಿ, ಇಂದಿರಾನಗರ, ಹೊನ್ನೂಟಗಿ, ಲಾಲಬಾಹಾದ್ದೂರ ಶಾಸ್ತ್ರೀ ನಗರ (ಕುಮಟಗಿ ಎಲ್ ಟಿ), ಕುಮಟಗಿ, ಹಡಗಲಿ, ಮಹತ್ಮಾ ಗಾಂಧಿ ನಗರ (ಹಡಗಲಿ ಎಲ್ ಟಿ) ಕಗ್ಗೋಡ, |

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



| ವಿಜಯಪುರ ಜಿಲ್ಲೆ | | | |
|---|---|---|---|
| **ಕ್ರ ಸಂ** | **ತಾಲ್ಲೂಕಿನ ಹೆಸರು** | **ಜಿಲ್ಲಾ ಪಂಚಾಯತಿ ಪ್ರಾದೇಶಿಕ ಚುನಾವಣಾ ಕ್ಷೇತ್ರದ ಸಂಖ್ಯೆ ಮತ್ತು ಹೆಸರು** | **ಜಿಲ್ಲಾ ಪಂಚಾಯತಿ ಪ್ರಾದೇಶಿಕ ಚುನಾವಣಾ ಕ್ಷೇತ್ರದ ವ್ಯಾಪ್ತಿಯಲ್ಲಿನ ಗ್ರಾಮಗಳ ಹೆಸರು** |
| 1 | 2 | 3 | 4 |
| **4** | ವಿಜಯಪುರ | 17-ಜುಮನಾಳ | ಐನಾಪೂರ, ಬೂರಣಾಪೂರ, ಹಿಟ್ನಳ್ಳಿ, ಉತ್ನಾಳ, ಚಿಂತಾಮಣಿ ನಗರ (ಉತ್ನಾಳ ಎಲ್ ಟಿ), ಹೆಗಡಿಹಾಳ, ಬಸವನಗರ (ಹೆಗಡಿಹಾಳಎಲ್ ಟಿ), ಕತಕನಹಳ್ಳಿ, ಉಕುಮನಾಳ, ಜುಮನಾಳ, ಖತಿಜಾಪೂರ, ಹೊನಗನಹಳ್ಳಿ, ಸವನಹಳ್ಳಿ. |
| **5** | **ತಿಕೋಟಾ** | 21-ಅರಕೇರಿ | ಅರಕೇರಿ, ಸಿದ್ದಾಪೂರ(ಅ), ಬರಟಗಿ, ಹಂಚಿನಾಳ ಪಿ.ಎಚ್, ಜಾಲಗೇರಿ, ಯತ್ನಾಳ, ಟಕ್ಕಳಕಿ, ಹುಬನೂರ, ಇಂದಿರಾನಗರ. |
| **6** | ತಿಕೋಟಾ | 22-ಕನಮಡಿ | ಕನಮಡಿ, ಬಾಬಾನಗರ, ಅಳಗಿನಾಳ, ಬಿಜ್ಜರಗಿ, ಘೋಣಸಗಿ, ಕಳ್ಳಕವಟಗಿ, ಸಿದ್ದಾಪುರ ಕೆ, ಮಲಕನದೇವರಹಟ್ಟಿ, ಸೋಮದೇವರ ಹಟ್ಟಿ, ಧನರ್ಗಿ. |
| **7** | ತಿಕೋಟಾ | 23- ಹೊನವಾಡ | ಲೋಹಗಾಂವ, ಇಟ್ಟಂಗಿಹಾಳ, ಸೇವಾಲಾಲನಗರ, ತೊರವಿ ಅತ್ತಾಲಟ್ಟಿ, ತೊರವಿ ಪಾರ್ಟ, ನವರಸಪೂರ, ತಾಜಪುರ.ಎಚ್, ಹರನಾಳ, ಕೊಟ್ಯಾಳ, ರತ್ನಾಪುರ ಹೊನವಾಡ. |

**ವಿಶೇಷ ಸೂಚನೆ:-**

**ವಿಜಯಪುರ ಜಿಲ್ಲೆಯ, ವಿಜಯಪುರ ಮತ್ತು ತಿಕೋಟಾ ತಾಲ್ಲೂಕುಗಳ ಜಿಲ್ಲಾ ಪಂಚಾಯಿತಿ ಕ್ಷೇತ್ರಗಳ ಚುನಾಯಿತ ಸದಸ್ಯರ ಸಂಖ್ಯೆ ಮತ್ತು ಪ್ರಾದೇಶಿಕ ಚುನಾವಣಾ ಕ್ಷೇತ್ರಗಳ ಸೀಮಾ/ಗಡಿ ನಿರ್ಣಯ ಕುರಿತಂತೆ, ದಿನಾಂಕ:23-01-2026ರ ಒಳಗಾಗಿ ಸಲ್ಲಿಸಲ್ಪಟ್ಟ ಆಕ್ಷೇಪಣೆ/ಅಹವಾಲುಗಳ ಪರಿಶೀಲನಾ ಅದಾಲತ್ ಅನ್ನು ದಿನಾಂಕ:27-01-2026 ರಂದು ಬೆಳಿಗ್ಗೆ10:30 ರಿಂದ ಮಧ್ಯಾಹ್ನ 1:30 ರವರೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಗೇಟ್-ನಂ-2, 2ನೇ ಮಹಡಿ, ಕೊಠಡಿ ಸಂಖ್ಯೆ:229, 230 ಬಹುಮಹಡಿಗಳ ಕಟ್ಟಡ, ಬೆಂಗಳೂರು-560001 ಇಲ್ಲಿ ನಡೆಸಲಾಗುವುದು. ಆಕ್ಷೇಪಣೆ ಮತು ಅಹವಾಲುಗಳನ್ನು ಸಲ್ಲಿಸಿರುವವರು ಅದಾಲತ್ ನಲ್ಲಿ ಭಾಗವಹಿಸಲು ಇಚ್ಛಿಸಿದಲ್ಲಿ, ಸರ್ಕಾರದಿಂದ ನೀಡಿರುವ ಭಾವಚಿತ್ರವುಳ್ಳ ಗುರುತಿನ ಚೀಟಿಯ ಮೂಲ ಪ್ರತಿಯನ್ನು ತಮ್ಮೊಂದಿಗೆ ಕಡ್ಡಾಯವಾಗಿ ತರತಕ್ಕದ್ದು.**

**(ಡಾ||ಎನ್. ನೋಮೇಶ್ ಕುಮಾರ್)**
ನಿರ್ದೇಶಕರು (ಪಂ. ರಾಜ್) ಮತ್ತು
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಹಾಗೂ ಸದಸ್ಯ ಕಾರ್ಯದರ್ಶಿ
ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗ

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH